ವಿಷಯ: ರಾಜ್ಯದಲ್ಲಿ ವೈದ್ಯಕೀಯ ವಿಶ್ವವಿದ್ಯಾನಿಲಯದ ಸ್ಥಾಪನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1344 (1855)

ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ವೈದ್ಯಕೀಯ ವಿಶ್ವವಿದ್ಯಾನಿಲಯ ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ ?

ಆ) ಈ ವಿಶ್ವವಿದ್ಯಾನಿಲಯ ಸ್ಥಾಪನೆಗಾಗಿ ಸರ್ಕಾರ ಕೈಗೊಂಡಿರುವ ನಿರ್ದಿಷ್ಟ ಕಾರ್ಯಕ್ರಮಗಳೇನು ?

ಇ) ಮೇಲ್ಕಂಡ ವಿಶ್ವವಿದ್ಯಾನಿಲಯವನ್ನು ಎಲ್ಲಿ ಸ್ಥಾಪಿಸಲಾಗುವುದು ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು.

ಆ) ಪರಿಶೀಲನೆಯಲ್ಲಿದೆ.

ಇ) ಪರಿಶೀಲನೆಯಲ್ಲಿದೆ.

ವಿಷಯ: ರಾಜ್ಯದಲ್ಲಿರುವ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1345 (1856)

ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿರುವ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ?

ಆ) ಮೇಲ್ಕಂಡ ಕಾಲೇಜುಗಳಲ್ಲಿ ಸರ್ಕಾರಿ ಆಸ್ಪತ್ರೆಗಳನ್ನು ಕ್ಲಿನಿಕಲ್ ಸೌಲಭ್ಯಕ್ಕಾಗಿ ಉಪಯೋಗಿಸುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು ?

ಇ) ಈ ಕಾಲೇಜುಗಳು ಮೇಲ್ಕಂಡ ಸೌಲಭ್ಯಗಳಿಗಾಗಿ ಸರ್ಕಾರಕ್ಕೆ ನೀಡಬೇಕಾಗಿರುವ ಬಾಕಿ ಹಣದ ಮೊತ್ತವೆಷ್ಟು ?

ಈ) 1990-91, 1991-92 ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ವೈದ್ಯಕೀಯ ಕಾಲೇಜುಗಳಿಗೆ ನೀಡಿರುವ ಸೀಟುಗಳೆಷ್ಟು, ಕಾಲೇಜುವಾರು ವಿವರ ನೀಡುವುದು ;

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 14 (ಹದಿನಾಲ್ಕು)

ಆ) ಹನ್ನೊಂದು - ಕ್ಲಿನಿಕಲ್ ಶುಲ್ಕವನ್ನು ವೈದ್ಯಕೀಯ ವಿದ್ಯಾಲಯಗಳು ಪಾವತಿ ಮಾಡದೆ ಇದ್ದ ಕಾರಣ ಸರ್ಕಾರಿ ಆಜ್ಞೆ ಸಂಖ್ಯೆ ಹೆಚ್‌ಎಫ್‌ಡಬ್ಲ್ಯೂ 343 ಎಂಎಸ್‌ಎಫ್ 90, ದಿನಾಂಕ 6-3-1992ರಂತೆ ಕ್ಲಿನಿಕಲ್ ಸೌಲಭ್ಯವನ್ನು ರದ್ದು ಪಡಿಸಲಾಗಿದೆ.

ಇ) ದಿನಾಂಕ 16-3-1992ರಂದು ಪರಿಶೀಲನಾ ಪರತ್ತಿಗೊಳಪಟ್ಟು ರೂ. 203.19ಲಕ್ಷಗಳು.

ಈ) ವಿವರಗಳನ್ನು ಅನುಬಂಧದಲ್ಲಿ ನೋಡಬಹುದು.

ಅನುಬಂಧ

		1990- 91	1991-92
1)	ಬೆಂಗಳೂರು ವೈದ್ಯಕೀಯ ಕಾಲೇಜು,	200	200
2)	ಮೈಸೂರು ವೈದ್ಯಕೀಯ ಕಾಲೇಜು,	175	175
3)	ಕರ್ನಾಟಕ ವೈದ್ಯಕೀಯ ಕಾಲೇಜು,	130	130